ಜೆಎಸ್‌ಎಸ್ ಮಹಾವಿದ್ಯಾಪೀಠ
ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ, ಮೈಸೂರು

# ಶಿವಾನುಭವ ದಾಸೋಹ–302

**24 ಜೂನ್ 2023 * ಶನಿವಾರ * ಸಂಜೆ 6.00**

ನವಜ್ಯೋತಿ ಸಭಾಂಗಣ, ಜೆಎಸ್‌ಎಸ್ ಮಹಿಳಾ ಕಾಲೇಜು, ಸರಸ್ವತಿಪುರಂ, ಮೈಸೂರು

---

### ದಿವ್ಯ ಆಶೀರ್ವಾದ

**ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು**
ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ, ಶ್ರೀ ಸುತ್ತೂರು ಕ್ಷೇತ್ರ

### ಅಧ್ಯಕ್ಷತೆ

**ಪ್ರೊ. ಆರ್. ಮೂಗೇಶಪ್ಪ**
ನಿರ್ದೇಶಕರು, ಕಾಲೇಜು ಶಿಕ್ಷಣ ವಿಭಾಗ, ಜೆಎಸ್‌ಎಸ್ ಮಹಾವಿದ್ಯಾಪೀಠ

### ಉಪನ್ಯಾಸ

**ಪ್ರೊ. ಮೊರಬದ ಮಲ್ಲಿಕಾರ್ಜುನ**
ನಿರ್ದೇಶಕರು, ಪ್ರಕಟಣ ವಿಭಾಗ, ಜೆಎಸ್‌ಎಸ್ ಮಹಾವಿದ್ಯಾಪೀಠ

ವಿಷಯ : ಮಾತೆಂಬುದು ಜ್ಯೋತಿರ್ಲಿಂಗ

ಭಜನೆ : ಶ್ರೀ ಶಿವರಾತ್ರಿ ರಾಜೇಂದ್ರ ಕಲಾ ತಂಡ, ಮೈಸೂರು

### ಪ್ರಾಯೋಜಕರು

**ಡಾ. ಬೆಳಕು ವಿ. ಚಂದ್ ಮತ್ತು ಶ್ರೀ ಬಿ. ನಿರಂಜನಮೂರ್ತಿ**
ಸಹಾಯಕ ನಿರ್ದೇಶಕರು, ಕಾಲೇಜು ಶಿಕ್ಷಣ ವಿಭಾಗ, ಜೆಎಸ್‌ಎಸ್ ಮಹಾವಿದ್ಯಾಪೀಠ

**ತಮಗೆ ಆದರದ ಸ್ವಾಗತ**

ಸುತ್ತೂರು ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠದ 23ನೇ ಪೀಠಾಧಿಪತಿಗಳಾದ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರು ಪ್ರಸಾದನಿಲಯಗಳು ಹಾಗೂ ಶಿಕ್ಷಣಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಜನತೆಯ ಸರ್ವಾಂಗೀಣ ಉನ್ನತಿಗೆ ಕಾರಣರಾದರು. ಶಿಕ್ಷಣದ ಮೂಲಕವೇ ಸಾಮಾಜಿಕ ಅಭಿವೃದ್ಧಿ ಸಾಧ್ಯ ಎಂಬುದನ್ನು ಅವರು ಮನಗಂಡಿದ್ದರು. ಶ್ರೀಗಳವರು ಜಾತಿ, ಮತ, ಪಂಥ, ಧರ್ಮಭೇದವಿಲ್ಲದೆ ಅನ್ನದಾಸೋಹ, ಜ್ಞಾನದಾಸೋಹದ ಜೊತೆಗೆ ಜನತೆಯ ಸಮಗ್ರ ಅಭಿವೃದ್ಧಿಗಾಗಿ, ನೈತಿಕತೆ ಹಾಗೂ ಧಾರ್ಮಿಕತೆಗಳ ಪ್ರಸಾರಕ್ಕಾಗಿ, ಹಲವಾರು ದಶಕಗಳ ಹಿಂದೆಯೇ ಶರಣತತ್ತ್ವ ಪ್ರಸಾರ ಸಮಿತಿ ಮುಂತಾದ ಸಂಸ್ಥೆಗಳ ಮೂಲಕ ಧರ್ಮ ದಾಸೋಹವನ್ನು ಪ್ರಾರಂಭಿಸಿದ್ದರು. 1986ರಲ್ಲಿ ಶರಣ ಸಾಹಿತ್ಯ ಪರಿಷತ್ತು ಹಾಗೂ ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿಯನ್ನು ಸ್ಥಾಪಿಸಿ ಆಧ್ಯಾತ್ಮಿಕ ಚಿಂತನೆಗೆ ಹೊಸ ಆಯಾಮವನ್ನು ನೀಡಿದರು.

ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ ದಿನಾಂಕ 12.5.1996ರಂದು 'ಶಿವಾನುಭವ ದಾಸೋಹ' ಕಾರ್ಯಕ್ರಮವನ್ನು ಪ್ರಾರಂಭಿಸಲಾಯಿತು. ಅಂದಿನಿಂದಲೂ ಪ್ರತಿ ತಿಂಗಳ ಕೊನೆಯ ಶನಿವಾರದಂದು ಈ ಕಾರ್ಯಕ್ರಮವು ನಿರಂತರವಾಗಿ ನಡೆದುಕೊಂಡು ಬರುತ್ತಿದೆ. ಧರ್ಮ, ದರ್ಶನ, ವಚನಸಾಹಿತ್ಯ, ಧರ್ಮಗಳ ತೌಲನಿಕ ವಿವೇಚನೆ, ಜೀವನಕಲೆ ಮೊದಲಾದ ವಿಷಯಗಳನ್ನು ಕುರಿತು ಉಪನ್ಯಾಸ ಏರ್ಪಡಿಸಲಾಗುತ್ತಿದೆ.

**ಪ್ರೊ. ಆರ್. ಮೂಗೇಶಪ್ಪನವರು** ವಿಜಯನಗರ ಜಿಲ್ಲೆ ಕೊಟ್ಟೂರಿನವರು. ಚಳ್ಳಕೆರೆಯ ಹೆಚ್‌ಪಿಪಿಸಿ ಕಾಲೇಜಿನಲ್ಲಿ ವಾಣಿಜ್ಯಶಾಸ್ತ್ರ ಉಪನ್ಯಾಸಕರಾಗಿ ವೃತ್ತಿ ಆರಂಭಿಸಿದರು. ಶಿರಾ, ಕೊರಟಗೆರೆ, ಹುಳಿಯಾರು ಸರ್ಕಾರಿ ಕಾಲೇಜುಗಳಲ್ಲಿ ಉಪನ್ಯಾಸಕರು ಹಾಗೂ ಪ್ರಾಂಶುಪಾಲರಾಗಿ ಕಾರ್ಯನಿರ್ವಹಿಸಿದರು. ನಂತರ ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಜಂಟಿ ನಿರ್ದೇಶಕ, ಹೆಚ್ಚುವರಿ ನಿರ್ದೇಶಕ ಹಾಗೂ ನಿರ್ದೇಶಕರಾಗಿ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದರು. ಪ್ರಸ್ತುತ ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾಲೇಜು ಶಿಕ್ಷಣ ವಿಭಾಗದ ನಿರ್ದೇಶಕರಾಗಿರುವರು.

**ಪ್ರೊ. ಮೊರಬದ ಮಲ್ಲಿಕಾರ್ಜುನರವರು** ಬಾಗಲಕೋಟೆ ಜಿಲ್ಲೆ ಗುಳೇದಗುಡ್ಡದವರು. ಉಪ್ಪಿನಂಗಡಿ ಸರ್ಕಾರಿ ಕಾಲೇಜಿನಲ್ಲಿ ಕನ್ನಡ ಉಪನ್ಯಾಸಕರಾಗಿ ವೃತ್ತಿ ಪ್ರಾರಂಭಿಸಿದರು. ಬೆಟ್ಟಂಪಾಡಿ, ಹುಣಸೂರು, ಪಿರಿಯಾಪಟ್ಟಣ, ಮೈಸೂರು, ಹಲ್ಲಹಳ್ಳಿ, ನಂಜನಗೂಡು ಕಾಲೇಜುಗಳಲ್ಲಿ ಉಪನ್ಯಾಸಕರು, ವಿಭಾಗದ ಮುಖ್ಯಸ್ಥರು ಮತ್ತು ಪ್ರಾಂಶುಪಾಲರಾಗಿ ಕಾರ್ಯನಿರ್ವಹಿಸಿದರು. ಕಾಲೇಜು ಶಿಕ್ಷಣ ಇಲಾಖೆಯ ಮೈಸೂರು ವಲಯದ ಪ್ರಾದೇಶಿಕ ಜಂಟಿ ನಿರ್ದೇಶಕರಾಗಿ ಸೇವೆಸಲ್ಲಿಸಿ ನಿವೃತ್ತಿ ಹೊಂದಿದರು. ಪ್ರಸ್ತುತ ಜೆಎಸ್‌ಎಸ್ ಮಹಾವಿದ್ಯಾಪೀಠದ ಪ್ರಕಟಣ ವಿಭಾಗದ ನಿರ್ದೇಶಕರಾಗಿರುವರು.

**ಶ್ರೀ ಬಿ. ನಿರಂಜನಮೂರ್ತಿಯವರು** ನಂಜನಗೂಡು ತಾಲ್ಲೂಕು ದೇವನೂರು ಗ್ರಾಮದವರು. ಜೆಎಸ್‌ಎಸ್ ಕಾಲೇಜಿನಲ್ಲಿ ಇಂಗ್ಲಿಷ್ ಉಪನ್ಯಾಸಕರಾಗಿ ವೃತ್ತಿ ಆರಂಭಿಸಿದರು. ನಂತರ ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾಲೇಜು ಶಿಕ್ಷಣ ವಿಭಾಗದಲ್ಲಿ ಸಹಾಯಕ ನಿರ್ದೇಶಕರಾಗಿರುವರು. ಧರ್ಮಪತ್ನಿ ಡಾ. ಬೆಳಕು ವಿ. ಚಂದ್ರವರು ಮೈಸೂರಿನ ಇಂಡಸ್ ವ್ಯಾಲಿ ಆಯುರ್ವೇದಿಕ್ ಸೆಂಟರ್‌ನಲ್ಲಿ ಮುಖ್ಯ ವೈದ್ಯಾಧಿಕಾರಿಗಳಾಗಿದ್ದಾರೆ. ಪುತ್ರ ನಿರುಪಮ್ ಎನ್. ವಿಜಯ್ ಎಸ್‌ಜೆಸಿಇ ಆವರಣದಲ್ಲಿರುವ ಜೆಎಸ್‌ಎಸ್ ಪಬ್ಲಿಕ್ ಶಾಲೆಯಲ್ಲಿ 7ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿದ್ದಾರೆ.